<u>ಅಸಲು ದಾವಾಃ-**47/2022**</u> ಪಿ.ಡಬ್ಲ್ಯೂ:- **1**

ದಿನಾಂಕಃ **24-06-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ:- ವಾದಿಗಳ ಪರ ವಕೀಲರಿಂದ:-</u>

ನಾನು ಈ ದಾವೆಯಲ್ಲಿ ವಾದಿಯ ಪರ ಮುಖ್ತಾರನಾಮೆಯನ್ನು ಪಡೆದುಕೊಂಡಿದ್ದು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದಾಗಿದೆ.

ಮುಖ್ತಾರನಾಮೆಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ.1 ಎಂದು, ದಿಃ 25-01-1968 ರ ನೊಂದಾಯಿತ ಕ್ರಯ ಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ.2 ಎಂದು, ನೋಟೀಸನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ.3 ಎಂದು, 5 ಅಂಚೆ ರಶೀದಿಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಪಿ.4 ರಿಂದ 8 ಎಂದು, 4 ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಪಿ.9 ರಿಂದ 12 ಎಂದು, ವಕೀಲರ ಮೂಲಕ ನೀಡಿದಂತಹ ನೋಟೀಸು ಜಾರಿಯಾಗದ್ದೇ ಹಿಂತಿರುಗಿ ಬಂದಿದ್ದು, ಸದರಿ ಅಂಚೆ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ಅಂಚೆ ಲಕೋಟೆಯನ್ನು ನಿಪಿ-13 ಎಂದು ಅದರಲ್ಲಿ ಇರುವ ನೋಟೀಸನ್ನು ನಿಪಿ-13(ಎ) ಎಂದು, ಆರ್ ಟಿ ಸಿ ಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ.14 ಎಂದು ಗುರುತಿಸಲಾಯಿತು.

ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು , ಕಾಲಾವಕಾಶ ನೀಡಲಾಯಿತು.

ಸಾ. ಹೇ. ತೆ. ನ್ಯಾ ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.